# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 38(24)
ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13-12-2021
ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;</td><td>ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿನ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಈ ಕೆಳಕಂಡಂತಿವೆ-<br>1. ಸರ್ಕಾರಿ ಪದವಿ ಪೂರ್ವ ಕಾಲೇಜುಗಳು -11<br>2. ಅನುದಾನಿತ ಪದವಿ ಪೂರ್ವ ಕಾಲೇಜುಗಳು-02<br>3. ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳು -11</td></tr>
<tr><td>ಆ)</td><td>ಈ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಂಖ್ಯೆ ಎಷ್ಟು;</td><td>ಬೋಧಕ/ಬೋಧಕೇತರ ಸಂಖ್ಯೆಯ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರಮ ಸಂಖ್ಯೆ</th><th>ಕಾಲೇಜುಗಳ ವಿಧ</th><th>ಬೋಧಕ</th><th>ಬೋಧಕೇತರ</th><th>ಒಟ್ಟು</th></tr>
<tr><td>1</td><td>ಸರ್ಕಾರಿ</td><td>60</td><td>03</td><td>63</td></tr>
<tr><td>2</td><td>ಅನುದಾನಿತ</td><td>12</td><td>03</td><td>15</td></tr>
<tr><td>3</td><td>ಅನುದಾನ ರಹಿತ</td><td>91</td><td>11</td><td>102</td></tr>
</table></td></tr>
<tr><td>ಇ)</td><td>ಸಮರ್ಪಕವಾದ ರೀತಿಯಲ್ಲಿ ತರಗತಿಗಳನ್ನು ನಡೆಸಲು ಕಟ್ಟಡದ ವ್ಯವಸ್ಥೆ ಇದೆಯೇ? (ವಿಸ್ತೃತವಾದ ಮಾಹಿತಿ ಒದಗಿಸುವುದು)</td><td>ಬೆಳ್ತಂಗಡಿ ತಾಲ್ಲೂಕಿನ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸಮರ್ಪಕವಾದ ರೀತಿಯಲ್ಲಿ ತರಗತಿಗಳನ್ನು ನಡೆಸಲು ಪ್ರಸ್ತುತ ಕಟ್ಟಡ ವ್ಯವಸ್ಥೆ ಇರುತ್ತದೆ.<br><br>ಆದಾಗ್ಯೂ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ತರಗತಿ ಕೊಠಡಿಗಳ ಕೊರತೆಯಿದ್ದಲ್ಲಿ ಪ್ರೌಢಶಾಲಾ ಕಟ್ಟಡದ ಕೊಠಡಿಗಳನ್ನು ಬಳಸಿಕೊಳ್ಳಲಾಗುತ್ತಿದೆ.<br><br>ಸರ್ಕಾರಿ ಪದವಿ ಪೂರ್ವ ಕಾಲೇಜು, ಕೊಕ್ಕಡ, ಈ ಕಾಲೇಜಿನಲ್ಲಿ ಪ್ರಸಕ್ತ ಸಾಲಿನಲ್ಲಿ 95 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, 04 ತರಗತಿ ಕೊಠಡಿಗಳ ಕೊರತೆಯಿದ್ದು, ಪ್ರೌಢಶಾಲಾ ಕಟ್ಟಡದ ತರಗತಿ ಕೊಠಡಿಗಳನ್ನು ಬಳಸಿಕೊಳ್ಳಲಾಗುತ್ತಿದೆ.</td></tr>
</table>

**ಸಂಖ್ಯೆ: ಇಡಿ 196 ಡಿಜಿಡಬ್ಲ್ಯೂ 2021**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು